# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಗದಗ

****

## ಅಧಿಸೂಚನೆ ಸಂಖ್ಯೆ 1/2026
## ದಿನಾಂಕ 25/09/2026

ವಿಷಯಃ ಗದಗ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 22 ಜವಾನರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಿಕೊಳ್ಳಲು ಆನ್‌ಲೈನ್‌ಮುಖಾಂತರ ಅರ್ಜಿಗಳನ್ನು ಅಹ್ವಾನಿಸುವ ಬಗ್ಗೆ

ಉಲ್ಲೇಖಃ
1. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರವರ ಪತ್ರ ಸಂಖ್ಯೆ ಡಿಜೆವಿ/712/2025 ದಿನಾಂಕ 09.02.2026 ಮತ್ತು ಡಿಜೆವಿ/712(16)/2025 ದಿನಾಂಕ 06.04.2026.
2. ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಎಲ್‌ಎಡಬ್ಲ್ಯೂ 01 ಎಲ್‌ಎಪಿ 2005 ಬೆಂಗಳೂರು ದಿನಾಂಕ 13.02.2008 ಹಾಗೂ ಎಲ್‌ಎಡಬ್ಲ್ಯ-166 ಎಲ್‌ಎಪಿ-2015, ದಿನಾಂಕ 06.03.2021.
3. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 03 ಸೆಹಿಮ 1995 ದಿನಾಂಕ 20.06.1995.
4. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2023, ಬೆಂಗಳೂರು ದಿನಾಂಕ 08.03.2023.
5. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೇನೆನಿ 2025 ಬೆಂಗಳೂರು ದಿನಾಂಕ 29.01.2026.
6. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2026 ಬೆಂಗಳೂರು ದಿನಾಂಕ 13.05.2026.
7. ಕಛೇರಿ ಟಿಪ್ಪಣಿ ಹಾಗೂ ಅದರ ಮೇಲಿನ ಆದೇಶಗಳು.

*****

**ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಃ 31.10.2026**

ಗದಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ನ್ಯಾಯಾಲಯಗಳಲ್ಲಿ ಪ್ರಸ್ತುತ ಖಾಲಿ ಇರುವ 22 ಜವಾನರ ಹುದ್ದೆಗಳಿಗಾಗಿ ಆರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ (online) ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ಗದಗ ಜಿಲ್ಲಾ ನ್ಯಾಯಾಲಯದ ಜಾಲತಾಣ (website) https://gadag.dcourts.gov.in/kn/online-recruitment/ ಈ ಲಿಂಕನ್ನು ಬಳಸಿಕೊಳ್ಳುವುದರ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಅರ್ಜಿ ಸಲ್ಲಿಸುವ ದಿನಾಂಕ ಹಾಗೂ ಕೊನೆಯ ದಿನಾಂಕದ ವಿವರ ಈ ಕೆಳಗಿನಂತಿರುತ್ತದೆ.

| | | |
|---|---|---|
| 1 | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 28/09/2026 |
| 2 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 31/10/2026 ರಾತ್ರಿ 11.59 ಘಂಟೆಯವರೆಗೆ ಮಾತ್ರ |
| 3 | ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 03/11/2026 |

ಈ ನೇಮಕಾತಿಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ.200448/2025 ರ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

1. ಜವಾನ ಹುದ್ದೆಗಳ ಸಂಖ್ಯೆ : 22

2. ವೇತನ ಶ್ರೇಣಿಃ ರೂ. 27000-650-29600-725-32500-800-35700-900-39300-1000-43300-1125-46675 ಮತ್ತು ಇತರೆ ಭತ್ಯೆಗಳು

3. ಹುದ್ದೆಗಳ ವರ್ಗೀಕರಣ

| ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ತೃತೀಯ ಲಿಂಗ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 1 | 4 | 2 | 1 | 1 | 1 | 1 | - | 11 |
| ಪರಿಶಿಷ್ಟ ಜಾತಿ | - | 1 ( ಪ್ರವರ್ಗ-ಸಿ ) | 1 ( ಪ್ರವರ್ಗ-ಎ ) | - | 1 ( ಪ್ರವರ್ಗ-ಬಿ ) | - | - | - | 3 |
| ಪರಶಿಷ್ಟ ಪಂಗಡ | - | - | - | - | - | - | - | 1 (ದೃಷ್ಟಿ ಮಾಂಧ್ಯ) | 1 |
| ಪ್ರವರ್ಗ- 1 | - | 1 | - | - | - | - | - | - | 1 |
| ಪ್ರವರ್ಗ- 2 ಎ | - | 1 | 1 | - | 1 | - | - | - | 3 |
| ಪ್ರವರ್ಗ- 2 ಬಿ | - | 1 | - | - | - | - | - | - | 1 |
| ಪ್ರವರ್ಗ- 3 ಎ | - | 1 | - | - | - | - | - | - | 1 |
| ಪ್ರವರ್ಗ- 3 ಬಿ | - | - | 1 | - | - | - | - | - | 1 |
| ಒಟ್ಟು | 1 | 9 | 5 | 1 | 3 | 1 | 1 | 1 | 22 |

4. ನಿಗದಿಪಡಿಸಿದ ಅರ್ಜಿ ಶುಲ್ಕ

| ಕ್ರ. ಸಂ. | ಅಭ್ಯರ್ಥಿಯ ಪ್ರವರ್ಗ | ನಿಗದಿಪಡಿಸಿದ ಶುಲ್ಕ |
|---|---|---|
| 1 | ಸಾಮಾನ್ಯ ವರ್ಗ | ರೂ. 200/- |
| 2 | ಪ್ರವರ್ಗ 2 ಎ, 2 ಬಿ, 3 ಎ, ಮತ್ತು 3 ಬಿ ಸೇರಿದ ಅಭ್ಯರ್ಥಿಗಳಿಗೆ. | ರೂ.100/- |
| 3 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ. | ಶುಲ್ಕ ವಿನಾಯತಿ ಇರುತ್ತದೆ. |

ನಿಗದಿತ ಶುಲ್ಕವನ್ನು ನ್ಯಾಯಾಲಯದ ಜಾಲತಾಣ (website) https://gadag.dcourts.gov.in/kn/online-recruitment/ ನದ್ದರಲ್ಲಿ ನೀಡಲಾದ ಲಿಂಕ್ ಮೂಲಕ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ State Bank Collect ಮೂಲಕ Online payment through net banking/credit card/debit card/UPI ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ /ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5. ಆಯ್ಕೆ ವಿಧಾನಃ

ಅಭ್ಯರ್ಥಿಗಳ ಆಯ್ಕೆಯನ್ನು ಈ ಕೆಳಗಿನ ನಿಯಮಾನುಸಾರ ಮಾಡಲಾಗುತ್ತದೆ.

1) ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977.

2) ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟಿರಿಯಲ್ಲಿ ಮತ್ತು ಇತರೆ ಹುದ್ದೆಗಳು) (ನೇಮಕಾತಿ ) (ತಿದ್ದುಪಡಿ ) ನಿಯಮಗಳು 2007 ಮತ್ತು 2021 ರ ಅನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

3) ಜವಾನ ಹುದ್ದೆಗಳಿಗೆ 10 ನೇ ತರಗತಿಯಲ್ಲಿ ಪಡೆದ ಸರಾಸರಿ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 1:10 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಒಟ್ಟು 10 ಅಂಕಗಳನ್ನು ನಿಗದಿಪಡಿಸಲಾಗಿದೆ. ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳು 10 ನೇ ತರಗತಿಯಲ್ಲಿ ಪಡೆದ ಅಂಕಗಳನ್ನು ಸಂದರ್ಶನಕ್ಕೆ ಕರೆಯಲು ಮಾತ್ರ ಪರಿಗಣಿಸಲಾಗುವುದು.

6. ಅರ್ಹತಾ ಮಾನದಂಡಗಳುಃ

(i). ಶೈಕ್ಷಣಿಕ ವಿದ್ಯಾರ್ಹತೆಃ

ಜವಾನ ಹುದ್ದೆಯ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಗಿನ ಅರ್ಹತೆಗಳನ್ನು ಹೊಂದಿರಬೇಕು.

ಎ. **10** ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

ಬಿ. ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.

ವಿಶೇಷ ಸೂಚನೆಃ ಕರ್ನಾಟಕ ಸರ್ಕಾರದ ತುತ್ತೋಲೆ ಸಂಖ್ಯೆ.ಸಿಆಸುಇ 81/ಸೇವನೆ 2017 ದಿನಾಂಕ 27.02.2018 ರನ್ವಯ ಈ ಕೆಳಕಂಡ ವಿದ್ಯಾರ್ಹತೆಯ ಕೋರ್ಸ್ ಗಳನ್ನು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆ ಕೋರ್ಸ್ ಗಳೆಂದು ಸ್ಪಷ್ಟಪಡಿಸಲಾಗಿದೆ.

1) ಸಿಬಿಎಸ್ಇ ಮತ್ತು ಐಸಿಎಸ್ಇ ಮಂಡಳಿಯು ನಡೆಸುವ ಕ್ಲಾಸ್ 10 ಪರೀಕ್ಷೆ.
2). ಇತರೇ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 10 ಪರೀಕ್ಷೆ.
3). ನ್ಯಾಷನಲ್ ಇನ್ ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್ಐಓಎಸ್) ವತಿಯಿಂದ ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್.
4). ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್ (ಕೆಓಎಸ್).

ಮೇಲೆ ತಿಳಿಸಿರುವ ಮಂಡಳಿಯ ಅಂಕ ಪಟ್ಟಿಗಳನು ಹೊರತು ಪಡಿಸಿ ಬೇರೆ ಮಂಡಳಿಯ ಅಂಕ ಪಟ್ಟಿಗಳನು ಪಡೆದು ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

(ii). ವಯೋಮಿತಿಃ

ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯ ಈ ಕೆಳಕಂಡ ವಯೋಮಿತಿಯನ್ನು ಹೊಂದಿರತಕ್ಕದ್ದು.

| ಕ್ರ.ಸಂ. | ಅಭ್ಯರ್ಥಿಯ ಪ್ರವರ್ಗ | ಕನಿಷ್ಠ ವಯೋಮಿತಿ | ಗರಿಷ್ಠ ವಯೋಮಿತಿ |
|---|---|---|---|
| 1 | ಸಾಮಾನ್ಯ ವರ್ಗ | 18 ವರ್ಷಗಳು | 35 + 5(*) ವರ್ಷಗಳು |
| 2 | ಪ್ರವರ್ಗ 2 ಎ, 2 ಬಿ, 3 ಎ, ಮತ್ತು 3 ಬಿ | 18 ವರ್ಷಗಳು | 38 + 5(*) ವರ್ಷಗಳು |
| 3 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 | 18 ವರ್ಷಗಳು | 40 + 5(*) ವರ್ಷಗಳು |

(*) ವಿಶೇಷ ಸೂಚನೆ : ಸರ್ಕಾರಿ ಆದೇಶ ಸಂಖ್ಯೆ.ಸಿಆಸುಇ 262 ಸೇನೆನಿ 2025 ಬೆಂಗಳೂರು ದಿನಾಂಕ 29.01.2026 ರ ಮತ್ತು ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ರವರ ಪತ್ರ ಸಂಖ್ಯೆ.ಡಿಜಿಎ/400/2021 ದಿನಾಂಕ 24.02.2026 ರ ನಿರ್ದೇಶನದ ಅನ್ವಯ ಸದರಿ ಸರ್ಕಾರಿ ಅದೇಶ ಹೊರಡಿಸಿದ ದಿನಾಂಕದಿಂದ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿಯ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ.

7. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿಧಾನ :

1) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸುವ ಮೊದಲು ಈ ಕೆಳಗೆ ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು ಮತ್ತು ತಪ್ಪಾಗದಂತೆ ನೋಡಿಕೊಳ್ಳತಕ್ಕದ್ದು. ಸರಿಯಾದ ಮಾಹಿತಿ ನೀಡದೇ ಇರುವ ಹಾಗೂ ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಅಭ್ಯರ್ಥಿಗಳು ಒಮ್ಮೆ ತಮ್ಮ ಅರ್ಜಿಯಲ್ಲಿ ನಮೂದಿಸಿದ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳಲ್ಲಿ ಯಾವುದೇ ಬದಲಾವಣೆಗೆ ತಂತ್ರಾಂಶದಲ್ಲಿ ಅವಕಾಶ ಇಲ್ಲದೆ ಇರುವುದರಿಂದ ಈ ಕುರಿತಂತೆ ತದನಂತರದಲ್ಲಿ ಬರುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

3) ಅಭ್ಯರ್ಥಿಯು ಎಸ್ ಎಸ್ ಎಲ್ ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ (ಜನ್ಮ ದಿನಾಂಕದ ಆಧಾರಕ್ಕಾಗಿ) ಪಿಡಿಎಫ್ ಮಾಡಿ ಅಪ್ ಲೋಡ ಮಾಡಬೇಕು. ಅಪಲೋಡ್ ಮಾಡದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

4) ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಮಿಂಚಂಚೆ (ಇ-ಮೇಲ್) ವಿಳಾಸ ಹೊಂದಿದ್ದಲ್ಲಿ ನಮೂದಿಸುವುದು.

5) ಅಭ್ಯರ್ಥಿಯ ಇತ್ತೀಳಿನ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್ ಲೋಡ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) 50 ಕೆಬಿ ಗಾತ್ರದ 5 ಸೆಂ.ಮೀ X 3.6 ಸೆಂ.ಮೀ ಅಳತೆಯುಳ್ಳ ಇತ್ತೀಚಿನ ಬಿಳಿಯ ಹಿನ್ನಲೆಯುಳ್ಳ ಭಾವಚಿತ್ರವನ್ನು .jpg ನಮೂನೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪಲೋಡ್ ಮಾಡತಕ್ಕದ್ದು. (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡತಕ್ಕದ್ದಲ್ಲ).

ಬ) 26 ಕೆಬಿ ಗಾತ್ರದ 2.5 ಸೆಂ.ಮೀ X 7.5 ಸೆಂ.ಮೀ ಅಳತೆಯುಳ್ಳ ಬಿಳಿ ಹಾಳೆಯ ಮೇಲೆ ಕಪ್ಪುಬಣ್ಣದ ಶಾಯಿಯ ಬಾಲಪಾಯಿಂಟ್ ಪೇನ್ನಿನಿಂದ ಸಹಿ ಮಾಡಿ jpg ನಮೂನೆಯಲ್ಲಿ ಅರ್ಜಿಗೆ ಅಪಲೋಡ್ ಮಾಡತಕ್ಕದ್ದು.

6) ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ಕೇಳಲಾದ ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮಕೈಗೊಳ್ಳುವುದು. ನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ಭರಣಾ ಮಾಡಿದ ಬಗ್ಗೆ ಪ್ರತಿಯನ್ನು ಡೌನಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಸಂದರ್ಶನ /ದಾಖಲಾತಿ ಪರಿಶೀಲನೆ / ಈ ಕಛೇರಿಯು ಅಪೇಕ್ಷಿಸಿದ ಸಮಯದಲ್ಲಿ ಹಾಜರಪಡಿಸತಕ್ಕದ್ದು.

7) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ವಿವರಗಳನ್ನು ಸರಿಯಾ ನಮೂದಿಸಲಾಗಿದೆಯೆ ಎಂಬುದನ್ನು ಖಚಿತಪಡಿಸಿಕೊಂಡ ನಂತರವೇ "submit button press" ಮಾಡತಕ್ಕದ್ದು.

8) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 31/10/2026 ರವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸುವುದು ಸೂಕ್ತ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.

9) ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ನ್ಯಾಯಾಲಯದ ಜಾಲತಾಣ (website) https://gadag.dcourts.gov.in/kn/online-recruitment/ ನೇದ್ದರಲ್ಲಿ ನೀಡಲಾದ ಲಿಂಕ್ ಮೂಲಕ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ State Bank Collect ಮೂಲಕ Online payment through net banking/credit card/debit card/ UPI ಮುಖಾಂತರ ಪಾವತಿಸಲು ದಿನಾಂಕ 03/11/2026 ಕೊನೆಯ ದಿನವಾಗಿರುತ್ತದೆ.

10) ಅರ್ಹತಾ ಪರೀಕ್ಷೆ / ಸಂದರ್ಶನದ ವೇಳಾ ಪಟ್ಟಿಯನ್ನು ನ್ಯಾಯಾಲಯದ ಜಾಲತಾಣ (website) https://gadag.dcourts.gov.in/kn/online-recruitment/ ನೇದ್ದರಲ್ಲಿ ಪ್ರಕಟಿಸಲಾಗುವುದು. ಇದನ್ನು ಹೊರತುಪಡಿಸಿ ಪ್ರತ್ಯೇಕವಾಗಿ ಯಾವುದೇ ಕರೆಯೋಲೆಗಳನ್ನು ಅಭ್ಯರ್ಥಿಗಳಿಗೆ ಈ ಕಛೇರಿಯಿಂದ ರವಾನಿಸಲಾಗುವುದಿಲ್ಲ. ಸಂದರ್ಶನಕ್ಕೆ / ಅರ್ಹತಾ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಹತಾ ಪರೀಕ್ಷೆ/ಸಂದರ್ಶನದ ದಿನಾಂಕವನ್ನು ತಿಳಿದುಕೊಳ್ಳಲು ಈ ನ್ಯಾಯಾಲಯದ ಜಾಲತಾಣವನ್ನು ಮೇಲಿಂದ ಮೇಲೆ ಗಮನಿಸತಕ್ಕದ್ದು.

11) ಈ ಕಛೇರಿಯಿಂದ ನಡೆಸುವ ಅರ್ಹತಾ ಪರೀಕ್ಷೆ/ ಸಂದರ್ಶನದ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಗೊತ್ತುಪಡಿಸಿದ ಚರವಾಣಿ (mobile) ಸಂಖ್ಯೆಗೆ ವಿದ್ಯುನ್ಮಾನ ಸಂದೇಶದ ( sms ಅಥವಾ e-mail) ಮೂಲಕ ತಿಳಿಸಲಾಗುವುದು. ಒಂದು ವೇಳೆ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ನೇಮಕಾತಿ ಪ್ರಾಧಿಕಾರ ಹೊಣೆಯಾಗುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ನ್ಯಾಯಾಲಯದ ಜಾಲತಾಣ (website) https://gadag.dcourts.gov.in/kn/online-recruitment/ ನೇದ್ದನ್ನು ವೀಕ್ಷಿಸಿ ಅರ್ಹತಾ ಪರೀಕ್ಷೆ / ಸಂದರ್ಶನದ ಬಗ್ಗೆ ಮಾಹಿತಿಯನ್ನು ತಿಳಿದುಕೊಂಡು ತಮ್ಮ ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಚುನಾವಣಾ ಗುರುತಿನ ಚೀಟಿ/ ಆಧಾರ್ ಕಾರ್ಡ್ / ವಾಹನ ಚಾಲನಾ ಪರವಾನಿಗೆ ಪತ್ರ/ ಪಾನಕಾರ್ಡ / ಪಾಸಪೋರ್ಟ ) ಅರ್ಹತಾ ಪರೀಕ್ಷೆ / ಸಂದರ್ಶನಕ್ಕೆ ಹಾಜರಾಗತಕ್ಕದ್ದು.

<u>ಸಾಮಾನ್ಯ ಸೂಚನೆಗಳು:</u>

ಅಭ್ಯರ್ಥಿಗಳು ಸಂದರ್ಶನ/ದಾಖಲಾತಿ ಪರಿಶೀಲನೆ/ಈ ಕಛೇರಿಯ ಸಂದರ್ಭಾನುಸಾರ ಅಪೇಕ್ಷಿಸಿದ ಸಮಯದಲ್ಲಿ ಈ ಕೆಳಕಂಡ ಮೂಲ ದಾಖಲಾತಿಗಳನ್ನು ಹಾಜಪಡಿಸತಕ್ಕದ್ದು.

1. ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.
2. ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು.
3. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಸೇರಿದ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರಗಳು.
4. ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಪಡೆದ ವೈದ್ಯಕೀಯ ಪ್ರಮಾಣಪತ್ರ.
5. ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ-98/ಸೇನೆನಿ/2005 ದಿನಾಂಕ 10.08.2005 ರ ಪ್ರಕಾರ ನಿಗದಿತ ನಮೂನೆ 2 ರಲ್ಲಿ ಸಂಬಂಧಪಟ್ಟ ಶಾಲೆಯಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿಸಿದ ಪ್ರಮಾಣಪತ್ರ.
6. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ 2 ರ ಮೀಸಲಾತಿ ಪ್ರಮಾಣಪತ್ರದ ಜೊತೆಗೆ ನಮೂನೆ 1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ (Creamylayer) ಬಗ್ಗೆ ತಹಶೀಲ್ದಾರರವರಿಂದ ಪಡೆದ ಪ್ರಮಾಣ ಪತ್ರ.
7. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 31.10.2026 ರಿಂದ 6 ತಿಂಗಳ ಒಳಗಿರುವ ಹಾಗೂ ಅರ್ಜಿದಾರರಿಗೆ ಸಂಬಂಧಿಕರಲ್ಲದ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರಗಳು.
8. ಅಭ್ಯರ್ಥಿಯು ಅಭ್ಯಸಿಸಿದ ಶಾಲೆ ನಿ ವಿದ್ಯಾಲಯದಿಂದ ಪಡೆದ ನಡತೆ ಪ್ರಮಾಣಪತ್ರ.
9. ಅಭ್ಯರ್ಥಿಯು ಕೋರಿರುವ ಮೀಸಲಾತಿಗಳನ್ನು (ಕನ್ನಡ ಮಾಧ್ಯಮ, ಯೋಜನಾ ನಿರಾಶ್ರಿತ, ಮಾಜಿ ಸೈನಿಕ, ತೃತೀಯ ಲಿಂಗ ಅಭ್ಯರ್ಥಿಗಳು ಇತ್ಯಾದಿ) ಖಾತ್ರಿ ಪಡಿಸಲು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಪ್ರಮಾಣಪತ್ರ / ಸೂಕ್ತ ದಾಖಲೆ.
10. ಜವಾನ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳಿಗೆ, ಎಸ್ ಎಸ್ ಎಲ್ ಸಿ ಅಥವಾ 10 ನೇ ತರಗತಿಯಲ್ಲಿ ಪಡೆದ ಸರಾಸರಿ ಅಂಕಗಳ ಆಧಾರದ ಮೇಲೆ ಸಂದರ್ಶನದ ಅರ್ಹತಾ ಪಟ್ಟಿಯನ್ನು ತಯಾರಿಸಬೇಕಾಗಿರುವುದರಿಂದ, ಶ್ರೇಣಿಗಳನ್ನು (ಗ್ರೇಡಿಂಗ್) ಹೊಂದಿದ ಅಂಕಪಟ್ಟಿ ಇರುವ ಅಭ್ಯರ್ಥಿಗಳು ಅದನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ನಿಖರವಾದ ಅಂಕಗಳನ್ನು ಪ್ರತಿಶತವನ್ನಾಗಿ (ಶೇಕಡಾವನ್ನಾಗಿ) ಪರಿವರ್ತಿಸಕೊಳ್ಳತಕ್ಕದ್ದು. ಹಾಗೇ ಪರಿವರ್ತಿಸಿಕೊಂಡ ಅಂಕಗಳು ಹಾಗೂ ಪ್ರತಿಶತ ಮಾತ್ರ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸತಕ್ಕದ್ದು. ನಿಖರವಾಗಿ ಪಡೆದ ಅಂಕಗಳನ್ನು ಕ್ರೂಢಿಕರಿಸಿ ತಯರಿಸಲಾದ ಅಂಕಪಟ್ಟಿಗಳನ್ನು ಸಂದರ್ಶನ / ಈ ಕಛೇರಿ ಅಪೇಕ್ಷಿಸಿದಲ್ಲಿ ಹಾಜರಪಡಿಸತಕ್ಕದ್ದು. ಒಂದು ವೇಳೆ ಶ್ರೇಣಿಗಳನ್ನೊಳಗೊಂಡ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ಹಾಜರಪಡಿಸದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಪರಿಗಣಿಸಲಾಗುವುದಿಲ್ಲ.
11. ಜನ್ಮ ದಿನಾಂಕವನ್ನು ದೃಢಿಕರಿಸಲು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣಪತ್ರವನ್ನು ಹಾಜರಪಡಿಸತಕ್ಕದ್ದು.
12. ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕಾಗಿ ಆಹ್ವಾನಿಸಿ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾತಕ್ಕದ್ದು.

13. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸಬೇಕು ಮತ್ತು ಪ್ರತಿಯೊಂದು ಅರ್ಜಿಗೆ ಪ್ರತ್ಯೇಕವಾಗಿ ಶುಲ್ಕವನ್ನು ಭರಣಾ ಮಾಡಬೇಕು.

14. ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ನಿಯಮಗಳಂತೆ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು.

15. ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಪ್ರಮಾಣಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

16. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಈ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಹುದ್ದೆಗಳಿಗೆ ಆಯ್ಕೆಯಾದ ಪಕ್ಷದಲ್ಲಿ ಆಯ್ಕೆಪಟ್ಟಿ ಪ್ರಕಟವಾದ 30 ದಿನಗಳೊಳಗಾಗಿ ಪಡೆಯತಕ್ಕದ್ದು.

17. ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂಬಂಧದಲ್ಲಿ ಅಧಿಕಾರಿಗಳಿಂದ ಅಥವಾ ಅಧಿಕಾರೇತರರಿಂದ ಯಾವುದೇ ರೀತಿಯ ಬಾಹ್ಯ ಬೆಂಬಲವನ್ನು ಪಡೆಯುವ ಪ್ರಯತ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಯಾವುದೇ ಮುನ್ಸೂಚನೆ ನೀಡದೆ ಅನರ್ಹಗೊಳಿಸಲಾಗುವುದು.

18. ಅಧಿಸೂಚನೆಯಲ್ಲಿ ನಮೂದಿಸಿದ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲೆಗಳು ಮತ್ತು ವಿವಿಧ ಮೀಸಲಾತಿಗಳಿಗೆ ಪಡೆದುಕೊಂಡ ಪ್ರಮಾಣಪತ್ರಗಳು, ಪರಿಶೀಲನೆ ಸಮಯದಲ್ಲಿ ಸುಳ್ಳೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿಕೆಯು ರದ್ದಾಗುತ್ತದೆ. ಮತ್ತು ಅಂತಹವರ ವಿರುದ್ಧ ತಪ್ಪು ಮಾಹಿತಿಯನ್ನು ಒದಗಿಸುವುದಕ್ಕೆ ಸಂಬಂಧಿಸಿದಂತೆ ಅಪರಾಧಿಕ ಪ್ರಕರಣವನ್ನು ಜರುಗಿಸಲಾಗುವುದು.

19. ವಿಕಲಚೇತನರು / ಮಾಜಿಸೈನಿಕರು/ ವಿಧವೆಯರು ವಯೋಮಿತಿ ಸಡಿಲಿಕೆಗಾಗಿ ಸಕ್ಷಮ ಪ್ರಾಧಿಕಾರಿಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

20. ಮಹಿಳಾ ಅಭ್ಯರ್ಥಿಗಳು, ವಿಕಲಚೇತನ ಅಭ್ಯರ್ಥಿಗಳು, ಯೋಜನಾನಿರಾಶ್ರಿತರು, ಕನಡ ಮಾಧ್ಯಮ, ಗ್ರಾಮೀಣ ಅಭ್ಯರ್ಥಿಗಳು ಮತ್ತು ಮಾಜಿಸೈನಿಕರಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಪಕ್ಷದಲ್ಲಿ ಆಯಾ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲಾಗುವುದು.

21. ನೇಮಕಾತಿ ಪ್ರಕ್ರಿಯೆಯಲ್ಲಿ ಈ ನೇಮಕಾತಿ ಪ್ರಾಧಿಕಾರರವು ನಿಯಮಾವಳಿಗನುಸಾರ ತೆಗೆದುಕೊಳ್ಳುವ ನಿರ್ಧಾರವೇ ಅಂತಿಮ ನಿರ್ಧಾರ.

25/9/26

(ನಾಗವೇಣಿ)

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಗದಗ.

ಜಾವಕ ಸಂಖ್ಯೆ: 4518 /2026.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಗದಗ ದಿನಾಂಕ: 25-09-2026.

ಪ್ರತಿಯನ್ನು :

1) ಮಹಾವಿಲೇಖನಾಧಿಕಾರಿಗಳು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಲಾಗಿದೆ.

2) ರಾಜ್ಯದ ಎಲ್ಲಾ ಜಿಲ್ಲೆಗಳ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ, ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ.

3) ನಿರ್ದೇಶಕರು, ವಾರ್ತಾ ಮತ್ತು ಪ್ರಸಾರ ಇಲಾಖೆ, ಬೆಂಗಳೂರು.

4) ಉಪನಿರ್ದೇಶಕರು, ವಾರ್ತಾ ಮತ್ತು ಪ್ರಸಾರ ಇಲಾಖೆ, ಗದಗ ರವರಿಗೆ ವ್ಯಾಪಕ ಪ್ರಚಾರಕ್ಕಾಗಿ.

5) ಉಪನಿರ್ದೇಶಕರು, ಜಿಲ್ಲಾ ಉದ್ಯೋಗ ವಿನಿಮಿಯ ಕಛೇರಿ, ಗದಗ.

6) ಗದಗ ಜಿಲ್ಲೆಯ ಎಲ್ಲಾ ಪೀಠಾಸೀನಾಧಿಕಾರಿಗಳು ಇವರಿಗೆ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು.

7) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ , ಹೊರವಾಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು.

8) ತಂತ್ರಾಂಶ ತಂತ್ರಜ್ಞರು, ಕಂಪ್ಯೂಟರ್ ವಿಭಾಗ, ಜಿಲ್ಲಾ ನ್ಯಾಯಾಲಯ ಗದಗ ಇವರಿಗೆ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲು.

9) ಈ ಕಛೇರಿಯ ಕಡತಕ್ಕಾಗಿ.